# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- (1) ಶ್ರೀ ಡಿ.ಓಂಕಾರಮೂರ್ತಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ, (2) ಶ್ರೀ ಕಲ್ಲೇಶಪ್ಪ (ಪ್ರಸ್ತುತ ನಿವೃತ್ತ), ಮತ್ತು (3) ಶ್ರೀ ಹೆಚ್.ಆರ್.ಪುಟ್ಟಪ್ಪ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ಬಗ್ಗೆ.

ಓದಲಾಗಿದೆ:- ಉಪ ನಿಬಂಧಕರು, ವಿಚಾರಣೆಗಳು-1. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೆಂಟ್ /ಉಪಲೋಕ್ /ಬಿಡಿ/958/2007/ಡಿಆರ್‌ಇ-1 ದಿನಾಂಕ 20-08-2013.

-----

ಪ್ರಸ್ತಾವನೆ

ಉಪ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಓದಲಾದ ದಿನಾಂಕ 20-08-2013ರ ಪತ್ರದಲ್ಲಿ (1) ಶ್ರೀ ಡಿ.ಓಂಕಾರಮೂರ್ತಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ, (2) ಶ್ರೀ ಕಲ್ಲೇಶಪ್ಪ (ಪ್ರಸ್ತುತ ನಿವೃತ್ತ), ಮತ್ತು (3) ಶ್ರೀ ಹೆಚ್.ಆರ್.ಪುಟ್ಟಪ್ಪ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ ಇವರುಗಳ ಇವರುಗಳ ವಿರುದ್ಧ ಕರ್ನಾಟಕ ಉಪ ಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸಿನಂತೆ ಕ್ರಮವಹಿಸುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12 (4)ರನ್ವಯ ಲೋಕಾಯುಕ್ತ ಸಂಸ್ಥೆಗೆ ವರದಿ ಮಾಡಬೇಕೆಂದು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ದಿನಾಂಕ 13-08-2013 ಸಂಖ್ಯೆ **Compt/Uplok/BD-958/2007/DRE-1** ರ ವರದಿಯಲ್ಲಿ ಫಿರ್ಯಾದುದಾರರಾದ ಶ್ರೀ ಏಕಾಂತಪ್ಪ, ಕಿಕ್ಕಿನಗೆರೆ ಅಂಚೆ, ಹರಪನಹಳ್ಳಿ ತಾಲ್ಲೂಕು ಇವರು ಕರ್ನಾಟಕ ಲೋಕಾಯುಕ್ತ ಕಚೇರಿಗೆ ದೂರು ಮನವಿ ಸಲ್ಲಿಸಿ, 2006ನೇ ಸಾಲಿನಲ್ಲಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಜೋಷಿ ಲಿಂಗಾಪುರ ಗ್ರಾಮದಲ್ಲಿ ಗೋಕಟ್ಟೆ ಕಾಮಗಾರಿಗೆ ಸಂಬಂಧಿಸಿದಂತೆ ಬೋಗಸ್ ಬಿಲ್ಲುಗಳನ್ನು ತಯಾರು ಮಾಡಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ತಪ್ಪಿತಸ್ಥರ ವಿರುದ್ಧ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಕೋರಿದ್ದರ ಮೇರೆಗೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್-2 ತಾಂತ್ರಿಕ ವಿಭಾಗ, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಕೈಗೊಂಡ ತನಿಖೆಯಲ್ಲಿ, (1) ಶ್ರೀ ಡಿ.ಓಂಕಾರಮೂರ್ತಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ, (2) ಶ್ರೀ ಕಲ್ಲೇಶಪ್ಪ (ಪ್ರಸ್ತುತ ನಿವೃತ್ತ), ಮತ್ತು (3) ಶ್ರೀ ಹೆಚ್.ಆರ್.ಪುಟ್ಟಪ್ಪ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ ಇವರುಗಳ ಸದರಿ

---2

ಕಾಮಗಾರಿಯಲ್ಲಿ ರೂ. 5,33,886/- ಗಳ ಖೊಟ್ಟಿ ದಾಖಲೆಗಳನ್ನು ಸೃಜಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವುದು ಕಂಡು ಬಂದಿರುವುದರಿಂದ ಸದರಿಯವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14 (ಎ) ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಬೇಕೆಂದು ಶಿಫಾರಸ್ಸು ಮಾಡಿದ್ದಾರೆ.

ಮಾನ್ಯ ಕರ್ನಾಟಕ ಉಪ ಲೋಕಾಯುಕ್ತರ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, (1) ಶ್ರೀ ಡಿ.ಓಂಕಾರಮೂರ್ತಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ, (2) ಶ್ರೀ ಕಲ್ಲೇಶಪ್ಪ (ಪ್ರಸ್ತುತ ನಿವೃತ್ತ), ಮತ್ತು (3) ಶ್ರೀ ಹೆಚ್.ಆರ್.ಪುಟ್ಟಪ್ಪ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ ಇವರುಗಳು ಸರ್ಕಾರದ ಅನುದಾನ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆಂದು ವರದಿ ಮಾಡಿರುವ ಹಿನ್ನೆಲೆಯಲ್ಲಿ, ಸದರಿ ಆಪಾದಿತ ಅಧಿಕಾರಿ / ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ ಗ್ರಾಅಪ 24 ಇಎನ್‌ಕ್ಯೂ 2013 ಬೆಂಗಳೂರು ದಿನಾಂಕ 20-09-2013</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, (1) ಶ್ರೀ ಡಿ.ಓಂಕಾರಮೂರ್ತಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ, (2) ಶ್ರೀ ಕಲ್ಲೇಶಪ್ಪ (ಪ್ರಸ್ತುತ ನಿವೃತ್ತ), ಮತ್ತು (3) ಶ್ರೀ ಹೆಚ್.ಆರ್.ಪುಟ್ಟಪ್ಪ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಕರ್ನಾಟಕ ಉಪ ಲೋಕಾಯುಕ್ತರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ

ಸಂಕಲನಕಾರರು,ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ;

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಉಪ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು. [ಮುಖ ಪತ್ರದೊಂದಿಗೆ]
4. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.

8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ
9. ಶ್ರೀ ಡಿ.ಓಂಕಾರಮೂರ್ತಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ,- ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ.
10. ಶ್ರೀ ಕಲ್ಲೇಶಪ್ಪ (ಪ್ರಸ್ತುತ ನಿವೃತ್ತ) - ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ.
11. ಶ್ರೀ ಹೆಚ್.ಆರ್.ಪುಟ್ಟಪ್ಪ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಪನಹಳ್ಳಿ - ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ.
12. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
13. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
14. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
15. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್